ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಲೋಕೋಪಯೋಗಿ ಇಲಾಖೆ ರಸ್ತೆ ಮತ್ತು ಕಟ್ಟಡಗಳ ಅಭಿವೃದ್ಧಿ ಕುರಿತು

ಶ್ರೀ ರಘುನಾಥ್ ರಾವ್ ಮಲ್ಕಾಪೂರೆ(ವಿಧಾನಸಭೆಯಿಂದ ಚುನಾಯಿತರಾದವರು) -

1138 (1247) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕಳೆದ ಮೂರು ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆಯಿಂದ ಪ್ರತಿ ವರ್ಷ ಕೈಗೊಂಡಿರುವ ರಸ್ತೆ ಮತ್ತು ಕಟ್ಟಡ ಕಾಮಗಾರಿಗಳಾವುವು; (ವಿಧಾನ ಸಭಾ ಕ್ಷೇತ್ರವಾರು ಅಂಕಿ ಅಂಶಗಳೊಂದಿಗೆ ವಿವರ ಒದಗಿಸುವುದು)

(ಆ) ಸದರಿ ಅವಧಿಯಲ್ಲಿ ಜಿಲ್ಲೆಯಲ್ಲಿ ಎಷ್ಟು ಕಿ.ಮೀ. ರಸ್ತೆಯನ್ನು ಅಭಿವೃದ್ಧಿ ಪಡಿಸಲಾಯಿತು; ಎಷ್ಟು ಕಿ.ಮೀ. ರಸ್ತೆಯನ್ನು ಹೊಸದಾಗಿ ನಿರ್ಮಿಸಲಾಯಿತು; ಎಷ್ಟು ಕಿ.ಮೀ. ರಸ್ತೆಯನ್ನು ಮೇಲ್ದರ್ಜೆಗೆ ಏರಿಸಲಾಯಿತು; ಯಾವ ಯಾವ ಕಟ್ಟಡಗಳು ಮತ್ತು ಸೇತುವೆಗಳನ್ನು ನಿರ್ಮಿಸಲಾಯಿತು; (ವಿಧಾನಸಭಾ ಕ್ಷೇತ್ರವಾರು ವಿವರಗಳನ್ನು ಒದಗಿಸುವುದು)

(ಇ) ಮೇಲ್ಕಂಡ ಕಾಮಗಾರಿಗಳಿಗೆ ಪ್ರತಿ ವರ್ಷ ವೆಚ್ಚ ಮಾಡಿದ ಹಣವೆಷ್ಟು; ಈ ಪೈಕಿ ರಾಜ್ಯ ಸರ್ಕಾರದ ಹಣವೆಷ್ಟು, ಕೇಂದ್ರ ಸರ್ಕಾರದ ಹಣವೆಷ್ಟು;

(ಈ) ಈ ಕಾಮಗಾರಿಗಳನ್ನು ನಿರ್ವಹಿಸಿದ ಗುತ್ತಿಗೆದಾರರು ಯಾರು ಮತ್ತು ಕಾಮಗಾರಿಗಳನ್ನು ಎಷ್ಟು ಕಾಲಮಿತಿಯೊಳಗೆ ನಿರ್ಮಿಸಲಾಗಿದೆ; ನಿರ್ಮಿಸದೇ ತಡೆಹಿಡಿಯಲಾದ ಕಾಮಗಾರಿಗಳೆಷ್ಟು? (ಅವುಗಳ ಸಾದಕ ಬಾದಕಗಳು ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು)